ಗಾರ್ಡ್ ಫೈಲ್

# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 604 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ | 21/02/2022 |
| 4) | ಉತ್ತರಿಸುವವರು | ಮಾನ್ಯ ಉನ್ನತ ಶಿಕ್ಷಣ, ಐಟಿ-ಬಿಟಿ ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು. |

************

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಧಾರ್ಮಿಕ ಅಲ್ಪ ಸಂಖ್ಯಾತರಿಗೆ ಸೇರಿದ ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ. ಕಾಲೇಜು)ಗಳು ಧಾರ್ಮಿಕ ಅಲ್ಪ ಸಂಖ್ಯಾತರ ಕಾಲೇಜುಗಳೆಂದು ಸ್ಥಾನಮಾನ ನೀಡುವಂತೆ ಕೋರಿ ಪ್ರಸ್ತಾವನೆಗಳನ್ನು ಸಲ್ಲಿಸಿದ್ದು, ಈ ಪ್ರಸ್ತಾವನೆಗಳನ್ನು ಇತ್ಯರ್ಥಪಡಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು; (ಆದೇಶಗಳ ಸಹಿತ ವಿವರ ನೀಡುವುದು) | ಸರ್ಕಾರದ ಗಮನಕ್ಕೆ ಬಂದಿದೆ. ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಯ ಸ್ಥಾನಮಾನ ನೀಡಲು ಅನುಸರಿಸಬೇಕಾದ ಕ್ರಮಗಳ ಕುರಿತು ನಿಯಮಾವಳಿಗಳನ್ನು ರೂಪಿಸಲಾಗುತ್ತಿದೆ. |
| ಆ) | ಧಾರ್ಮಿಕ ಅಲ್ಪ ಸಂಖ್ಯಾತರಿಗೆ ಸೇರಿದ ಕೈಗಾರಿಕಾ ತರಬೇತಿ ಸಂಸ್ಥೆ (ಐ.ಟಿ.ಐ. ಕಾಲೇಜು)ಗಳನ್ನು ಧಾರ್ಮಿಕ ಅಲ್ಪ ಸಂಖ್ಯಾತರ ಶಿಕ್ಷಣ ಸಂಸ್ಥೆ ಎಂದು ಘೋಷಿಸಲು / ಸ್ಥಾನಮಾನ ನೀಡಲು ಬೇಕಾಗಿರುವ ಮಾರ್ಗಸೂಚಿಗಳನ್ನು / ಅಧಿಸೂಚನೆಗಳನ್ನು ಹೊರಡಿಸಲಾಗಿದೆಯೇ; ಹೊರಡಿಸದಿರಲು ಕಾರಣವೇನು? ಯಾವ ಕಾಲಮಿತಿಯೊಳಗೆ ಮಾರ್ಗಸೂಚಿಗಳನ್ನು ಹೊರಡಿಸಲಾಗುವುದು? (ವಿವರ ನೀಡುವುದು) | ಯಾವುದೇ ಮಾರ್ಗಸೂಚಿ / ಅಧಿಸೂಚನೆಗಳನ್ನು ಹೊರಡಿಸಿರುವುದಿಲ್ಲ. ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಯ ಸ್ಥಾನಮಾನ ನೀಡಲು ಅನುಸರಿಸಬೇಕಾದ ಕ್ರಮಗಳ ಕುರಿತು ನಿಯಮಾವಳಿಗಳನ್ನು ರೂಪಿಸಲಾಗುತ್ತಿದ್ದು, ಶೀಘ್ರದಲ್ಲೆ ಪ್ರಕಟಿಸಲಾಗುವುದು. |

**ಸಂಖ್ಯೆ: ಕೌಉಜೀಇ 11 ಕೈತಪ್ರ 2022**

(ಡಾ.ಸಿ.ಎನ್.ಅಶ್ವತ್ಥ ನಾರಾಯಣ)
ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು
ತಂತ್ರಜ್ಞಾನ, ವಿದ್ಯುನ್ಮಾನ ಮತ್ತು
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಸಚಿವರು